ಕರ್ನಾಟಕ ಸರ್ಕಾರ

**ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಹಾಗೂ ಆಯ್ಕೆ ಪ್ರಾಧಿಕಾರ**

**ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-1/2019-20 ದಿನಾಂಕ: 02-03-2020**

**339 ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ**

ಈ ಕಛೇರಿಯ ದಿನಾಂಕ: 03.03.2020 ರ ಪ್ರಕಟಣೆಯನ್ನು ಮುಂದುವರೆಸುತ್ತಾ, ಸದರಿ ಪ್ರಕಟಣೆಯಲ್ಲಿ 339 ಅರಣ್ಯ ರಕ್ಷಕ ಹುದ್ದೆಗಳ ನೇಮಕಾತಿ ಕುರಿತಂತೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದು, ದಿನಾಂಕ: 16.03.2020 ರಿಂದ 15.04.2020 ರ ವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ದಿನಾಂಕ: 17.04.2020 ರ ವರೆಗೆ ಅರ್ಜಿ ಶುಲ್ಕ ಪಾವತಿಸಲು ದಿನಾಂಕವನ್ನು ನಿಗಧಿಪಡಿಸಲಾಗಿರುತ್ತದೆ.

ಆದರೆ, ಕೊರೊನಾ ವೈರಸ್ ದೇಶಾದ್ಯಂತ ವ್ಯಾಪಿಸುವುದನ್ನು ತಡೆಯಲು ಕೇಂದ್ರ ಸರ್ಕಾರವು ದಿನಾಂಕ: 14.04.2020 ರವರೆಗೆ ಲಾಕ್‌ಡೌನ್ ಘೋಷಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಹಾಗೂ ಅರ್ಜಿ ಶುಲ್ಕವನ್ನು ಪಾವತಿಸಲು ತೊಡಕು ಉಂಟಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 15.05.2020 ರವರೆಗೆ ವಿಸ್ತರಿಸಲಾಗಿದೆ ಹಾಗೂ ಅರ್ಜಿ ಶುಲ್ಕವನ್ನು ಪಾವತಿಸಲು ದಿನಾಂಕ: 18.05.2020 ರವರೆಗೆ ಕಾಲವಿಸ್ತರಣೆ ಮಾಡಲಾಗಿರುತ್ತದೆ.

ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಇಲಾಖಾ website: www.aranya.gov.in ನ್ನು ನೋಡಬಹುದು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)
ಹಾಗೂ ಆಯ್ಕೆ ಪ್ರಾಧಿಕಾರ

ಸ್ಥಳ: ಬೆಂಗಳೂರು
ದಿನಾಂಕ: 01.04.2020